ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ 01 ಇಎಪಿ 2024

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು
ದಿನಾಂಕ: 29.08.2024.

## ಸುತ್ತೋಲೆ

ವಿಷಯ: 2024-25 ನೇ ಶೈಕ್ಷಣಿಕ ಸಾಲಿನಲ್ಲಿ ತಾಂತ್ರಿಕ ಪರೀಕ್ಷಾ ಮಂಡಳಿಯಿಂದ ನಡೆಸುವ ನವೆಂಬರ್-2024 ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗೆ ವಿದ್ಯಾರ್ಥಿಗಳನ್ನು ನೋಂದಾಯಿಸಿಕೊಳ್ಳುವ ಬಗ್ಗೆ.

ಉಲ್ಲೇಖ:
1. ಈ ಕಛೇರಿಯ ಜ್ಞಾಪನ ಸಂಖ್ಯೆ: ಬಿಟಿಇ/01/ಇಎಪಿ/2024, ದಿನಾಂಕ: 20.06.2024.
2. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಬಿಟಿಇ/01/ಇಎಪಿ/2024, ದಿನಾಂಕ: 14.08.2024.

*-*-*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಜ್ಞಾಪನದಲ್ಲಿ 2024-25 ನೇ ಶೈಕ್ಷಣಿಕ ಸಾಲಿನಲ್ಲಿ ತಾಂತ್ರಿಕ ಪರೀಕ್ಷಾ ಮಂಡಳಿಯಿಂದ ನಡೆಸುವ ನವೆಂಬರ್ -2024 ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗೆ ವಿದ್ಯಾರ್ಥಿಗಳು ದಂಡ ರಹಿತವಾಗಿ ಮತ್ತು ವಿವಿಧ ಹಂತಗಳಲ್ಲಿ ದಂಡ ಸಹಿತವಾಗಿ ಪರೀಕ್ಷಾ ಶುಲ್ಕ ಪಾವತಿಸಿ ಪರೀಕ್ಷೆಗೆ ನೋಂದಾಯಿಸಿಕೊಳ್ಳಲು ಸೂಚಿಸಲಾಗಿತ್ತು.

ಉಲ್ಲೇಖ (2) ರ ಸುತ್ತೋಲೆಯಲ್ಲಿ ನವೆಂಬರ್ 2024 ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗೆ ದಿನಾಂಕ: 12.08.2024 ರವರೆಗೆ ದಂಡ ರಹಿತವಾಗಿ ನಿಗದಿತ ಪರೀಕ್ಷಾ ಶುಲ್ಕವನ್ನು ಪಾವತಿಸಿ, ನವೆಂಬರ್ 2024 ರ ಸೆಮಿಸ್ಟರ್ ಪರೀಕ್ಷೆಗೆ ನೋಂದಾಯಿಸಿಕೊಳ್ಳದ ಎಲ್ಲಾ ವಿದ್ಯಾರ್ಥಿಗಳ ಮಾಹಿತಿಗಳನ್ನು ಸಂಸ್ಥೆಯ ಸೂಚನಾ ಫಲಕದಲ್ಲಿ ಪ್ರಕಟಿಸಿ ಹಾಗೂ ಸುತ್ತೋಲೆ ಮೂಲಕ ತರಗತಿಗಳಲ್ಲಿ ವಿದ್ಯಾರ್ಥಿಗಳ ಗಮನಕ್ಕೆ ತರಲು ಮತ್ತು ಪೋಷಕರಿಗೆ ಮಾಹಿತಿ ನೀಡಲು ಕ್ರಮ ವಹಿಸುವಂತೆ ಎಲ್ಲಾ ಪ್ರಾಂಶುಪಾಲರುಗಳಿಗೆ ತಿಳಿಸಲಾಗಿತ್ತು.

ಮುಂದುವರೆದು, ದಿನಾಂಕ: 13.08.2024 ರಿಂದ 26.08.2024 ರವರೆಗೆ ಪ್ರತಿ ಸೆಮಿಸ್ಟರ್‌ಗೆ ರೂ. 50/- ದಂಡ ಶುಲ್ಕದೊಡನೆ ಪರೀಕ್ಷಾ ಶುಲ್ಕವನ್ನು ಪಾವತಿಸಿ ನೋಂದಾಯಿಸಿಕೊಳ್ಳದ ಎಲ್ಲಾ ವಿದ್ಯಾರ್ಥಿಗಳ ಕೋರ್ಸುವಾರು ಮಾಹಿತಿಗಳನ್ನು ಸಂಸ್ಥೆಯ ಸೂಚನಾ ಫಲಕದಲ್ಲಿ ಪ್ರಕಟಿಸಿ ಹಾಗೂ ಸುತ್ತೋಲೆ ಮೂಲಕ ತರಗತಿಗಳಲ್ಲಿ ವಿದ್ಯಾರ್ಥಿಗಳ ಗಮನಕ್ಕೆ ತರಲು ಮತ್ತು ಪೋಷಕರಿಗೆ ಮಾಹಿತಿ ನೀಡಲು ಕ್ರಮ ವಹಿಸುವಂತೆ ಎಲ್ಲಾ ಪ್ರಾಂಶುಪಾಲರುಗಳಿಗೆ ತಿಳಿಸಲಾಗಿದೆ.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ.

ಇವರಿಗೆ:

ರಾಜ್ಯದ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ – ಮಾಹಿತಿಗಾಗಿ.

ಪ್ರತಿ:

1. ಆಯುಕ್ತರ ಆಪ್ತಶಾಖೆ – ಅವಗಾಹನೆಗಾಗಿ.
2. ನಿರ್ದೇಶಕರ ಆಪ್ತಶಾಖೆ – ಅವಗಾಹನೆಗಾಗಿ.
3. ಇ-ಆಡಳಿತ ವಿಭಾಗ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು).
4. ಇಸಿಎಸ್/ಇಎಫ್‌ಎಸ್/ಇಆರ್‌ಎಸ್, ಮುಂದಿನ ಕ್ರಮಕ್ಕಾಗಿ.
5. ರಿಜಿಸ್ಟ್ರಾರ್ (ಪರೀಕ್ಷೆ).
6. ಉಪ ನಿರ್ದೇಶಕರು (ಪರೀಕ್ಷೆ).
7. ಕಾರ್ಯದರ್ಶಿಯವರ ಆಪ್ತಶಾಖೆ.
8. ಗಣಕ ಕೇಂದ್ರ ವಿಭಾಗ – ಬಿಟಿಇ ಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು.
9. ಕಛೇರಿ ಪ್ರತಿ.

Scanned with CamScanner